# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 09 ಹೆಚ್‌ಹೆಚ್‌ಎಲ್ 2024

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ:30.03.2024

## ಅಧಿಸೂಚನೆ

ಭಾರತ ಚುನಾವಣಾ ಆಯೋಗವು ಲೋಕಸಭೆಗೆ ಸಾರ್ವತ್ರಿಕ ಚುನಾವಣೆ 2024ನ್ನು ಘೋಷಿಸಿದ್ದು, ಕರ್ನಾಟಕದಲ್ಲಿ ಮೊದಲ ಹಂತದಲ್ಲಿ 14 ಲೋಕಸಭಾ ಕ್ಷೇತ್ರಗಳಿಗೆ ದಿನಾಂಕ:26.04.2024ರ ಶುಕ್ರವಾರದಂದು ಹಾಗೂ ಇನ್ನುಳಿದ 14 ಲೋಕಸಭಾ ಕ್ಷೇತ್ರಗಳಿಗೆ ಎರಡನೇ ಹಂತ ಹಾಗೂ ಶೋರಾಪುರ-36 ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯನ್ನು ದಿನಾಂಕ:07.05.2024ರ ಮಂಗಳವಾರದಂದು ನಡೆಸುತ್ತಿದೆ.

ಸದರಿ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವಂತಹ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ಆಯಾ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳಿಗೆ, ಶಾಲಾ ಕಾಲೇಜುಗಳಿಗೆ (ಅನುದಾನಿತ ಶಿಕ್ಷಣ ಸಂಸ್ಥೆಗಳು ಒಳಗೊಂಡಂತೆ) ಹಾಗೂ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಒಳಗೊಂಡಂತೆ ದಿನಾಂಕ:26.04.2024 ಮತ್ತು ದಿನಾಂಕ:07.05.2024ರಂದು ನಡೆಯುವ ಚುನಾವಣೆಗೆ ಕೆಳಗಿನ ಅಂಕಣದಲ್ಲಿ ನಮೂದಿಸಿರುವ ಆಯಾ ಚುನಾವಣಾ ಕ್ಷೇತ್ರಗಳಿಗೆ ಸೀಮಿತಗೊಳಿಸಿ ಸಾರ್ವತ್ರಿಕ ರಜೆಯನ್ನು ಘೋಷಿಸಿದೆ.

ಲೋಕಸಭಾ ಕ್ಷೇತ್ರಗಳ ಅರ್ಹ ಮತದಾರರಾಗಿರುವ ಎಲ್ಲಾ ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರೆ ಸಂಸ್ಥೆಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಪ್ರಜಾಪ್ರತಿನಿಧಿ ಕಾಯ್ದೆ 1951 ಕಲಂ 135 ಬಿ ಅಡಿಯಲ್ಲಿನ ಎಲ್ಲಾ ಉಪಬಂಧಗಳಿಗೆ ಒಳಪಟ್ಟು ವೇತನ ಸಹಿತ ರಜೆ ನೀಡಲು ಈ ಮೂಲಕ ಆದೇಶಿಸಿದೆ.

ದಿನಾಂಕ:26.04.2024 ಮತ್ತು 07.05.2024ರಂದು ಸಾರ್ವತ್ರಿಕ ರಜೆಯನ್ನು Negotiable Instrument Act 1881ರ ಪ್ರಕಾರವು ಸಹ ಘೋಷಿಸಿದೆ.

ಈ ರಜೆಯು ತುರ್ತು ಸೇವೆಗಳಿಗೆ ಅನ್ವಯಿಸುವುದಿಲ್ಲ. ಆದಾಗ್ಯೂ ಕೂಡ ತುರ್ತು ಸೇವೆಯಡಿ ಕೆಲಸ ಮಾಡುವ ನೌಕರರಿಗೆ ಮತ ಚಲಾಯಿಸಲು ಅನುಕೂಲವಾಗುಂತೆ ವ್ಯವಸ್ಥೆ ಮಾಡತಕ್ಕದ್ದು.

–2

24/4/24
Plz put it on our website.

23/4/24

ದಿನಾಂಕ:26.04.2024 ಮತ್ತು 07.05.2024ರಂದು ಚುನಾವಣೆ ನಡೆಯಲಿರುವ ಲೋಕಸಭಾ ಕ್ಷೇತ್ರಗಳ ವಿವರಗಳನ್ನು ಕೆಳಗಿನ ಅಂಕಣದಲ್ಲಿ ನೀಡಲಾಗಿದೆ.

| ಕ್ರ. ಸಂ. | ಮೊದಲ ಹಂತದಲ್ಲಿ ದಿನಾಂಕ:26.04.2024ರಂದು ನಡೆಯಲಿರುವ ಲೋಕಸಭಾ ಚುನಾವಣಾ ಕ್ಷೇತ್ರಗಳ ಹೆಸರು | ಕ್ರ.ಸಂ | ಎರಡನೇ ಹಂತದಲ್ಲಿ ದಿನಾಂಕ:07.05.2024ರಂದು ನಡೆಯಲಿರುವ ಲೋಕಸಭಾ ಚುನಾವಣಾ ಕ್ಷೇತ್ರಗಳ ಹೆಸರು |
|---|---|---|---|
| 1 | 15-ಉಡುಪಿ-ಚಿಕ್ಕಮಗಳೂರು | 1 | 1-ಚಿಕ್ಕೋಡಿ |
| 2 | 16-ಹಾಸನ | 2 | 2-ಬೆಳಗಾವಿ |
| 3 | 17-ದಕ್ಷಿಣ ಕನ್ನಡ | 3 | 3-ಬಾಗಲಕೋಟೆ |
| 4 | 18-ಚಿತ್ರದುರ್ಗ | 4 | 4-ವಿಜಯಪುರ |
| 5 | 19-ತುಮಕೂರು | 5 | 5-ಕಲಬುರಗಿ |
| 6 | 20-ಮಂಡ್ಯ | 6 | 6-ರಾಯಚೂರು |
| 7 | 21-ಮೈಸೂರು | 7 | 7-ಬೀದರ್ |
| 8 | 22-ಚಾಮರಾಜನಗರ | 8 | 8-ಕೊಪ್ಪಳ |
| 9 | 23-ಬೆಂಗಳೂರು ಗ್ರಾಮಾಂತರ | 9 | 9-ಬಳ್ಳಾರಿ |
| 10 | 24-ಬೆಂಗಳೂರು ಉತ್ತರ | 10 | 10-ಹಾವೇರಿ |
| 11 | 25-ಬೆಂಗಳೂರು ಕೇಂದ್ರ | 11 | 11-ಧಾರವಾಡ |
| 12 | 26-ಬೆಂಗಳೂರು ದಕ್ಷಿಣ | 12 | 12-ಉತ್ತರ ಕನ್ನಡ |
| 13 | 27-ಚಿಕ್ಕಬಳ್ಳಾಪುರ | 13 | 13-ದಾವಣಗೆರೆ |
| 14 | 28-ಕೋಲಾರ | 14 | 14-ಶಿವಮೊಗ್ಗ |

| ಕ್ರ. ಸಂ. | ದಿನಾಂಕ:07.05.2024ರಂದು ನಡೆಯಲಿರುವ ವಿಧಾನಸಭಾ ಉಪ ಚುನಾವಣಾ ಕ್ಷೇತ್ರದ ಹೆಸರು |
|---|---|
| 1 | 36-ಶೋರಾಪುರ, ಯಾದಗಿರಿ ಜಿಲ್ಲೆ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿಜಯಕುಮಾರ ಹೆಚ್.ಬಿ.) 20/03
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ರಾಜ್ಯ ಶಿಷ್ಟಾಚಾರ)
20/03

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಮುಖ್ಯ ಚುನಾವಣಾಧಿಕಾರಿಗಳು ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿಗಳು, ಸಿಆಸುಇ (ಚುನಾವಣೆಗಳು)
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು

--3